ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105
VIJAYANAGARA SRI KRISHNADEVARAYA UNIVERSITY
"Jnana Sagara" Campus, Vinayaka Nagara, Cantonment, Ballari - 583 105
ಕುಲಸಚಿವರು
08392-242703
08392-242097

ಸಂಖ್ಯೆ:ವಿಶ್ರೀಕೃವಿಬ/ವಿ.ಮಂ.ವಿ/ಸ್ನಾತಕೋತ್ತರ/2020-21/1519 ದಿನಾಂಕ: 11.11.2020

# ಸುತ್ತೋಲೆ

**ವಿಷಯ:** ವಿಶ್ವವಿದ್ಯಾಲಯದ 2020-21ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ಆಫ್‌ಲೈನ್ ತರಗತಿಗಳನ್ನು ಪ್ರಾರಂಭಿಸುವ ಕುರಿತು.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಇಡಿ 334 ಯುಎನ್ಇ 2020, ಬೆಂಗಳೂರು, ದಿನಾಂಕ:09.11.2020 ಮಾರ್ಗಸೂಚಿ.
2. ಮಾನ್ಯ ಕುಲಪತಿಗಳ ನಿರ್ದೇಶನ ದಿನಾಂಕ: 10.11.2020

*****

ಈ ಸುತ್ತೋಲೆ ಮೂಲಕ ವಿಶ್ವವಿದ್ಯಾಲಯದ ಎಲ್ಲಾ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ ಸಂಯೋಜಕರು/ಸ್ನಾತಕೋತ್ತರ ಕೇಂದ್ರದ ನಿರ್ದೇಶಕರು/ವಿಶೇಷಾಧಿಕಾರಿಗಳಿಗೆ ತಿಳಿಯಪಡಿಸುವುದೇನೆಂದರೆ, ವಿಶ್ವವಿದ್ಯಾಲಯದ 2020-21ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ದ್ವಿತೀಯ ಮತ್ತು ತೃತೀಯ ವರ್ಷದ ವಿದ್ಯಾರ್ಥಿಗಳಿಗೆ ದಿನಾಂಕ: 17.11.2020ರ ರಿಂದ ಭೌತಿಕ ತರಗತಿಗಳನ್ನು (ಆಫ್‌ಲೈನ್ ಮುಖಾಂತರ) ಮುಂದುವರೆಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು, ಆಫ್‌ಲೈನ್ ತರಗತಿಗಳನ್ನು ಉಲ್ಲೇಖ 01ರನ್ವಯ (ಸರ್ಕಾರದ ಆದೇಶ ಇದರೊಂದಿಗೆ ಲಗತ್ತಿಸಿದೆ) ಸರ್ಕಾರದ ಮಾರ್ಗಸೂಚಿಯನ್ನು ಅನುಸರಿಸಿ ಭೌತಿಕ ತರಗತಿಗಳನ್ನು ಪ್ರಾರಂಭಿಸಲು ಈ ಸುತ್ತೋಲೆ ಮೂಲಕ ತಿಳಿಸಲಾಗಿದೆ.

11/11/2020
ಕುಲಸಚಿವರು
ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

ಗೆ,
ಎಲ್ಲಾ ಸ್ನಾತಕೋತ್ತರ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
2. ಕುಲಸಚಿವರು (ಮೌಲ್ಯಮಾಪನ), ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
3. ಎಲ್ಲಾ ನಿಕಾಯಗಳ ಡೀನರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
4. ಎಲ್ಲಾ ವಿಭಾಗಗಳ ಮುಖ್ಯಸ್ಥರು/ಸಂಯೋಜಕರುಗಳು ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
5. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಕೊಪ್ಪಳ.
6. ಸಂಯೋಜಕರು, ಸ್ನಾತಕೋತ್ತರ ಕೇಂದ್ರ, ನಂದಿಹಳ್ಳಿ.
7. ವಿಶೇಷಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ.
8. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಘಟಕ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
9. ನಿರ್ದೇಶಕರು, ಐ. ಟಿ. ಕೋಶ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
10. ಎಲ್ಲಾ ನಿಲಯಪಾಲಕರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ.
11. ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಸ್ನಾತಕೋತ್ತರ ಪದವಿ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಂಶುಪಾಲರು.
12. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್-**19** ಹಿನ್ನೆಲೆಯಲ್ಲಿ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ಪ್ರಮಾಣಿತ ಕಾರ್ಯಾಚರಣಾ ವಿಧಾನ - ಮಾರ್ಗಸೂಚಿ. **( Standard Operating Procedure – S O P)** ಕುರಿತು ಆದೇಶ.

ಓದಲಾಗಿದೆ: 1. **University Grant Commission** ಪತ್ರ ಸಂಖ್ಯೆ: **DO 14-08/2020 (CPP-II)** ದಿನಾಂಕ: 05-11-2020.

2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ನ ಪತ್ರ ಸಂಖ್ಯೆ:ಕರಾಉಶಿಪ/39/ಶೈಕ್ಷಣಿಕ ಚಟುವಟಿಕೆ/2020-21/679, ದಿನಾಂಕ:09-11-2020.

ಪ್ರಸ್ತಾವನೆ:

ಮೇಲೆ ಓದಲಾದ (1) ರ ದಿನಾಂಕ :05-11-2020 ರ **University Grant Commission** ರವರ ಪತ್ರದಲ್ಲಿ, ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ, ತರಗತಿ ಮತ್ತು ಪರೀಕ್ಷೆಗಳನ್ನು ನಡೆಸುವ ಕುರಿತಂತೆ, UGC ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಅದರನ್ವಯ **2020-21**ನೇ ಸಾಲಿನ ಶೈಕ್ಷಣಿಕ ಕಾರ್ಯಚಟುವಟಿಕೆಗಳನ್ನು ಪ್ರಾರಂಭಿಸಲು ಹಾಗೂ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೋವಿಡ್-19 ಸೋಂಕು ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ UGC ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

ಮೇಲೆ ಓದಲಾದ (2) ರ ದಿನಾಂಕ:09-11-2020 ಪತ್ರದಲ್ಲಿ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ತರಗತಿ ಮತ್ತು ಪರೀಕ್ಷೆಗಳನ್ನು ವಿಶ್ವವಿದ್ಯಾಲಯ / ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸುವ ಕುರಿತು ಹೊರಡಿಸಿರುವ ಮಾರ್ಗಸೂಚಿಗಳನ್ವಯ 2020-21 ನೇ ಶೈಕ್ಷಣಿಕ ಸಾಲಿನ ಚಟುವಟಿಗ\ಕೆಗಳನ್ನು ಪ್ರಾರಂಭಿಸಲು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕ್ರಮ ವಹಿಸುವ ಕುರಿತು ಪ್ರಮಾಣಿತ ಕಾರ್ಯಾಚರಣಾ ವಿಧಾನ (Standard Operating Procedure-SOP) ಕರಡು ಮಾರ್ಗಸೂಚಿಯನ್ನು ತಯಾರಿಸಿ ಸರ್ಕಾರಕ್ಕೆ ಮುಂದಿನ ಕ್ರಮಕ್ಕಾಗಿ ಕಳುಹಿಸಿರುತ್ತಾರೆ.

UGC ಮಾರ್ಗಸೂಚಿ ಹಾಗೂ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಇವರಿಂದ ಬಂದಿರುವ ಮಾರ್ಗಸೂಚಿಯನ್ನು ಪರಿಶೀಲಿಸಿ, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು/ ಖಾಸಗಿ ವಿಶ್ವವಿದ್ಯಾಲಯ / ಸರ್ಕಾರಿ / ತಾಂತ್ರಿಕ/ ಡಿಪ್ಲೊಮಾ/ ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸುವ ಕುರಿತು 2020-21 ನೇ ಶೈಕ್ಷಣಿಕ ಸಾಲಿನ ಚಟುವಟಿಕೆಗಳನ್ನು ಪ್ರಾರಂಭಿಸಲು ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ : ಇಡಿ 334 ಯುಎನ್ಇ 2020, ಬೆಂಗಳೂರು, ದಿನಾಂಕ: 09-11-2020.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ದಿನಾಂಕ: 17-11-2020 ರಿಂದ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು/ ಖಾಸಗಿ ವಿಶ್ವವಿದ್ಯಾಲಯಗಳು / ಸರ್ಕಾರಿ / ತಾಂತ್ರಿಕ/ ಡಿಪ್ಲೊಮಾ/ ಅನುದಾನ/

ಅನುದಾನ ರಹಿತ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದ್ದು, ಕೇಂದ್ರ ಸರ್ಕಾರದ University Grant Commission ನೀಡಿರುವ ಮಾರ್ಗಸೂಚಿಯಂತೆ ಶೈಕ್ಷಣಿಕ ಸಂಸ್ಥೆಗಳು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾರ್ಗಸೂಚಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ.

ಸದರಿ ಮಾರ್ಗಸೂಚಿಯನ್ನು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸರ್ಕಾರಿ / ತಾಂತ್ರಿಕ/ ಡಿಪ್ಲೊಮಾ/ ಅನುದಾನಿತ/ ಅನುದಾನ ರಹಿತ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳು/ ಖಾಸಗಿ ವಿಶ್ವವಿದ್ಯಾಲಯಗಳು ಪಾಲಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Sheetal M. Hiremath

( ಶೀತಲ್.ಎಂ.ಹಿರೇಮಠ )
ಸರ್ಕಾರದ ಅ ಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ-1)

ಇವರಿಗೆ,

1) ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು,ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು,
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು,
4) ಡಾ.ಕೆ ಸುದರ್ಶನ್, ಅಧ್ಯಕ್ಷರು, ಕೋವಿಡ್ -19 ತಾಂತ್ರಿಕ ಸಲಹಾ ಸಮಿತಿ,
5) ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು
7) ಆಯುಕ್ತರು, ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು,
8) ನಿರ್ದೇಶಕರು, ವಾರ್ತಾ ಇಲಾಖೆ, ಬೆಂಗಳೂರು,
9) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು,
10) ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗೀ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರು (ಆಯುಕ್ತರು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಮುಖಾಂತರ)
11) ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ/ ತಾಂತ್ರಿಕ ವಿಶ್ವವಿದ್ಯಾಲಯಗಳ/ ಖಾಸಗೀ ವಿಶ್ವವಿದ್ಯಾಲಯಗಳ ಕುಲಸಚಿವರು.
12) ರಾಜ್ಯದ ಎಲ್ಲಾ ಅನುದಾನ ರಹಿತ ಕಾಲೇಜುಗಳು (ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಮುಖಾಂತರ)
13) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಉಪಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ) ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು,
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ.

# ಕೋವಿಡ್–19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸಲು ಪ್ರಮಾಣಿತ ಕಾರ್ಯಚರಣಾ ವಿಧಾನ

## ( STANDARD OPERATING PROCEDURE - SOP )

ಕರ್ನಾಟಕ ಸರ್ಕಾರ

**ಸರ್ಕಾರದ ಆದೇಶ ಸಂಖ್ಯೆ: ಇಡಿ 334 ಯುಎನ್ಇ 2020,**

**ಬೆಂಗಳೂರು, ದಿನಾಂಕ:09.11.2020ರ ಮಾರ್ಗಸೂಚಿ**

## ಕೋವಿಡ್-19 ಹಿನ್ನೆಲೆಯಲ್ಲಿ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನುಪ್ರಾರಂಭಿಸಲು ಪ್ರಮಾಣಿತ ಕಾರ್ಯಾಚರಣಾ ವಿಧಾನ

**( Standard Operating Procedure – SOP )**

### ಶೈಕ್ಷಣಿಕ ಮಾರ್ಗಸೂಚಿಗಳು

### a. ಸ್ನಾತಕೋತ್ತರ ಮತ್ತು ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ:

### ಆಯ್ಕೆ-1: ಭೌತಿಕ ತರಗತಿಗಳಿಗೆ ಹಾಜರಾಗುವುದು

- ಭೌತಿಕ ತರಗತಿಗಳನ್ನು ದಿನಾಂಕ: 17-11-2020 ರಿಂದ ಪ್ರಾರಂಭಿಸುವುದು.
- ಭೌತಿಕವಾಗಿ ಕಾಲೇಜಿಗೆ ಬಂದು ತರಗತಿಗಳಿಗೆ ಹಾಜರಾಗಲು ಸಿದ್ಧರಿರುವ ವಿದ್ಯಾರ್ಥಿಗಳಿಗೆ ಅವರ ಪೋಷಕರಿಂದ ನಿಗದಿತ ನಮೂನೆಯಲ್ಲಿ ಸಹಿ ಮಾಡಿದ ಒಪ್ಪಿಗೆ ಪತ್ರ ಪಡೆದು ಭೌತಿಕ ತರಗತಿಗಳನ್ನು ನಡೆಸುವುದು.

  ಭೌತಿಕ ತರಗತಿಗಳನ್ನು ನಡೆಸುವಾಗ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಕಾಲೇಜಿನಲ್ಲಿ ಲಭ್ಯವಿರುವ ಒಟ್ಟು ತರಗತಿ ಕೊಠಡಿಗಳ ಸಂಖ್ಯೆಗೆ ಅನುಗುಣವಾಗಿ ಆರೋಗ್ಯ ಇಲಾಖೆಯಿಂದ ಹೊರಡಿಸಲಾಗಿರುವ ಮತ್ತು ಪ್ರಸ್ತುತ ಮಾರ್ಗಸೂಚಿಗಳ ಪ್ರಕಾರ ದೈಹಿಕ ಅಂತರವನ್ನು ಕಾಪಾಡಿಕೊಂಡು ಸುರಕ್ಷಿತವಾಗಿ ತರಗತಿಗಳನ್ನು ನಡೆಸಲು ಅವಶ್ಯವಿರುವಂತೆ ತರಗತಿ ವೇಳಾಪಟ್ಟಿಯನ್ನು ಕಾಲೇಜಿನ ಹಂತದಲ್ಲಿಯೇ ಸಿದ್ಧಪಡಿಸಿಕೊಳ್ಳುವುದು.
- ಬೋಧನಾ, ಪ್ರಯೋಗಾಲಯ ಮತ್ತು ಪ್ರಾಜೆಕ್ಟ್ ತರಗತಿಗಳನ್ನು ಅವಶ್ಯವಿದ್ದಲ್ಲಿ ಪಾಳಿ ವ್ಯವಸ್ಥೆಯ (shift system) ಮೇರೆಗೆ ನಡೆಸುವುದು.

### ಆಯ್ಕೆ-2: ಆನ್‌ಲೈನ್ ತರಗತಿಗಳ ಮೂಲಕ ಅಭ್ಯಾಸ ಮಾಡುವುದು;

- ಭೌತಿಕ ತರಗತಿಗಳಿಗೆ ಹಾಜರಾಗಲು ಇಚ್ಛಿಸದ ವಿದ್ಯಾರ್ಥಿಗಳಿಗೆ ಆನ್‌ಲೈನ್ ತರಗತಿಗಳನ್ನು ನಡೆಸುವುದು.
- ಆನ್‌ಲೈನ್ ತರಗತಿಗಳಿಗೆ ಹಾಜರಾಗಲು ಬಯಸಿದ ವಿದ್ಯಾರ್ಥಿಗಳಿಗೆ ಪಠ್ಯಕ್ರಮದ ಬಗ್ಗೆ ಇರುವ ಅನುಮಾನ ಅಥವಾ ಸಮಸ್ಯೆಗಳನ್ನು ನಿವಾರಿಸುವ ಸಂಬಂಧ ಪ್ರತಿ ದಿನ ಭೌತಿಕ ಸಂಪರ್ಕ ತರಗತಿಗಳನ್ನು (Contact Classes) ನಡೆಸುವುದು.
- ಸಂಪರ್ಕ ತರಗತಿಗಳನ್ನು ನಡೆಸುವಾಗ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಕಾಲೇಜಿನಲ್ಲಿ ಲಭ್ಯವಿರುವ ಒಟ್ಟು ತರಗತಿಕೊಠಡಿಗಳ ಸಂಖ್ಯೆಗೆ ಅನುಗುಣವಾಗಿ ಆರೋಗ್ಯ ಇಲಾಖೆಯಿಂದ ಹೊರಡಿಸಲಾಗಿರುವ ಮತ್ತು ಪ್ರಸ್ತುತ ಮಾರ್ಗಸೂಚಿಗಳ ಪ್ರಕಾರ ದೈಹಿಕ ಅಂತರವನ್ನು ಕಾಪಾಡಿಕೊಂಡು ಸುರಕ್ಷಿತವಾಗಿ ತರಗತಿಗಳನ್ನು ನಡೆಸಲು ಅವಶ್ಯವಿರುವಂತೆ ತರಗತಿ ವೇಳಾ ಪಟ್ಟಿಯನ್ನು ಕಾಲೇಜಿನ ಹಂತದಲ್ಲಿಯೇ ಸಿದ್ಧಪಡಿಸಿಕೊಳ್ಳುವುದು.

ಎಲ್ಲಾ ಅಧ್ಯಾಪಕರು ತಮ್ಮ ತರಗತಿಗಳ ವಿದ್ಯಾರ್ಥಿಗಳಿಗೆ ಪಠ್ಯಕ್ರಮದ ಕುರಿತು ಮುಂದಿನ ಕನಿಷ್ಠ ಒಂದು ತಿಂಗಳ ಅಧ್ಯಯನ ಸಾಮಗ್ರಿಗಳನ್ನು ಪ್ರತಿ Period/ Session ಗೆ ಸಂಬಂಧಿಸಿದಂತೆ ತಯಾರಿಸಿ ವಿದ್ಯಾರ್ಥಿಗಳಿಗೆ ಟೆಲಿಗ್ರಾಂ/ ವಾಟ್ಸಾಪ್/ ಇ-ಮೇಲ್ ಮೂಲಕ ಕಡ್ಡಾಯವಾಗಿ ನೀಡುವುದು. ಅಧ್ಯಯನ ಸಾಮಗ್ರಿಗಳು Video Lectures, PowerPoint Presentations, E-Notes, E-Books, Audio Books ಮತ್ತು Practice Question ಇತ್ಯಾದಿಗಳ ರೂಪದಲ್ಲಿ ಇರತಕ್ಕದ್ದು. ಸದರಿ ಅಧ್ಯಯನ ಸಾಮಗ್ರಿಗಳನ್ನು ಕಾಲೇಜಿನ ವೆಬ್‌ಸೈಟ್‌ನಲ್ಲಿ ಕಡ್ಡಾಯವಾಗಿ upload ಮಾಡತಕ್ಕದ್ದು.

**೬. ಸ್ನಾತಕೋತ್ತರ ಮತ್ತು ಅಂತಿಮ ವರ್ಷ ಹೊರತು ಪಡಿಸಿ ಇತರೆ ವಿದ್ಯಾರ್ಥಿಗಳಿಗೆ:**

- ವಿದ್ಯಾರ್ಥಿಗಳಿಗೆ ಆನ್‌ಲೈನ್ ತರಗತಿಗಳನ್ನು ನಡೆಸುವುದು.
- ವಿದ್ಯಾರ್ಥಿಗಳಿಗೆ ಪಠ್ಯಕ್ರಮದ ಬಗ್ಗೆ ಇರುವ ಅನುಮಾನ ಅಥವಾ ಸಮಸ್ಯೆಗಳನ್ನು ನಿವಾರಿಸುವ ಸಂಬಂಧ ಪ್ರತಿ ದಿನ ಭೌತಿಕ ಸಂಪರ್ಕ ತರಗತಿಗಳನ್ನು (Contact Classes) ನಡೆಸುವುದು.
- ಸಂಪರ್ಕ ತರಗತಿಗಳನ್ನು ನಡೆಸುವಾಗ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಕಾಲೇಜಿನಲ್ಲಿ ಲಭ್ಯವಿರುವ ಒಟ್ಟು ತರಗತಿ ಕೊಠಡಿಗಳ ಸಂಖ್ಯೆಗೆ ಅನುಗುಣವಾಗಿ ಆರೋಗ್ಯ ಇಲಾಖೆಯಿಂದ ಹೊರಡಿಸಲಾಗಿರುವ ಮತ್ತು ಪ್ರಸ್ತುತ ಮಾರ್ಗಸೂಚಿಗಳ ಪ್ರಕಾರ ದೈಹಿಕ ಅಂತರವನ್ನು ಕಾಪಾಡಿಕೊಂಡು ಸುರಕ್ಷಿತವಾಗಿ ತರಗತಿಗಳನ್ನು ನಡೆಸಲು ಅವಶ್ಯವಿರುವಂತೆ ತರಗತಿ ವೇಳಾಪಟ್ಟಿಯನ್ನು ಕಾಲೇಜಿನ ಹಂತದಲ್ಲಿಯೇ ಸಿದ್ಧಪಡಿಸಿಕೊಳ್ಳುವುದು.
- ಎಲ್ಲಾ ಅಧ್ಯಾಪಕರು ತಮ್ಮ ತರಗತಿಗಳ ವಿದ್ಯಾರ್ಥಿಗಳಿಗೆ ಪಠ್ಯಕ್ರಮದ ಕುರಿತು ಮುಂದಿನ ಕನಿಷ್ಠ ಒಂದು ತಿಂಗಳ ಅಧ್ಯಯನ ಸಾಮಾಗ್ರಿಗಳನ್ನು ಪ್ರತಿ Period/ Session ಗೆ ಸಂಬಂಧಿಸಿದಂತೆ ತಯಾರಿಸಿ ವಿದ್ಯಾರ್ಥಿಗಳಿಗೆ ಟೆಲಿಗ್ರಾಂ/ ವಾಟ್ಸಾಪ್/ ಇ-ಮೇಲ್ ಮೂಲಕ ಕಡ್ಡಾಯವಾಗಿ ನೀಡುವುದು. ಅಧ್ಯಯನ ಸಾಮಗ್ರಿಗಳು Video Lectures, PowerPoint Presentations, E-Notes, E-Books, Audio Books ಮತ್ತು Practice Questions ಇತ್ಯಾದಿಗಳ ರೂಪದಲ್ಲಿ ಇರತಕ್ಕದ್ದು. ಸದರಿ ಅಧ್ಯಯನ ಸಾಮಗ್ರಿಗಳನ್ನು ಕಾಲೇಜಿನ ವೆಬ್‌ಸೈಟ್‌ನಲ್ಲಿ ಕಡ್ಡಾಯವಾಗಿ upload ಮಾಡತಕ್ಕದ್ದು.

ಆನ್‌ಲೈನ್/ಸಂಪರ್ಕ ತರಗತಿಗಳಿಗೆ ಹಾಜರಾಗುವ ಎಲ್ಲಾ ವಿದ್ಯಾರ್ಥಿಗಳು ಆನ್-ಕ್ಯಾಂಪಸ್ ಹಾಗೂ ಆಫ್-ಕ್ಯಾಂಪಸ್ ಹಾಸ್ಟೆಲ್‌ಗಳಲ್ಲಿ ಉಳಿದುಕೊಳ್ಳಬಹುದು.

## II. ಸಾಮಾನ್ಯ ಮಾರ್ಗಸೂಚಿಗಳು

- ಕಾಲೇಜಿನ ಸಂಪೂರ್ಣ ಕಟ್ಟಡ, ಮುಖ್ಯದ್ವಾರ, ಶೌಚಾಲಯ ಹಾಗೂ ಎಲ್ಲಾ ಕೊಠಡಿಗಳಲ್ಲಿನ ಪೀಠೋಪಕರಣ ಮತ್ತು ಪರ್ಯಸಾಮಾಗ್ರಿಗಳನ್ನು ಸ್ಯಾನಿಟೈಸ್ ಮಾಡಿಸುವುದು.

- ಬೋಧಕರು, ವಿದ್ಯಾರ್ಥಿಗಳು ಹಾಗೂ ಇತರೆ ಸಿಬ್ಬಂದಿ ಕಡ್ಡಾಯವಾಗಿ 3 ದಿನಗಳ ಮುಂಚೆ ಕೋವಿಡ್-19 (RTPCR) ಪರೀಕ್ಷೆಯನ್ನು ಮಾಡಿಕೊಂಡು Test Report Negative ಇದ್ದಲ್ಲಿ ಮಾತ್ರ ವಿಶ್ವವಿದ್ಯಾಲಯ / ಕಾಲೇಜುಗಳಿಗೆ ಹಾಜರಾಗುವುದು.

- ಎಲ್ಲಾ ಕಾಲೇಜುಗಳು ತಮ್ಮ ತಮ್ಮ ಸಮೀಪವಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗೊಂದಿಗೆ Mapping ಮಾಡಿಕೊಳ್ಳುವುದು.

- ಪ್ರತಿ ತರಗತಿಯಿಂದ ಒಬ್ಬ ವಿದ್ಯಾರ್ಥಿಯನ್ನು ಗುರುತಿಸಿ ತನ್ನ ಸಹಪಾಠಿಗಳಲ್ಲೇನಾದರು ಕೋವಿಡ್ ಗೆ ಸಂಬಂಧಿಸಿದ ಲಕ್ಷಗಳನ್ನು ಕಂಡುಬಂದಲ್ಲಿ ಅದನ್ನು ಕೋವಿಡ್ ಕಾರ್ಯಪಡೆ / ಸೆಲ್ ಗಮನಕ್ಕೆ ತರುವಂತೆ ಸೂಚಿಸುವುದು.

- ಕಾಲೇಜುಗಳಿಗೆ ಹಾಜರಾಗುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಮನೆಯಿಂದಲೇ ಊಟ ಮತ್ತು ಕುಡಿಯುವ ನೀರನ್ನು ಸ್ವತ: ತಂದು ಅವರೇ ಉಪಯೋಗಿಸುವುದು.

- ಉಪನ್ಯಾಸಕರು ಕಡ್ಡಾಯವಾಗಿ ಮಾಸ್ಕ್ ಮತ್ತು Face Shield/ Visor ಅನ್ನು ಧರಿಸುವುದು.

- ಕಾಲೇಜುಗಳಲ್ಲಿ ಲೈಬ್ರರಿ ಮತ್ತು ಕ್ಯಾಂಟೀನ್‌ಗಳನ್ನು ತೆರೆಯುವಂತಿಲ್ಲ.

- ಕಾಲೇಜುಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಎನ್.ಸಿ.ಸಿ ಹಾಗೂ ಎನ್.ಎಸ್.ಎಸ್ ಚಟುವಟಿಕೆಗಳನ್ನು ಪ್ರಾರಂಭಿಸುವಂತಿಲ್ಲ.

-4-

ಪ್ರವೇಶ/ ನಿರ್ಗಮನ ಕೇಂದ್ರಗಳ ಸುರಕ್ಷತಾ ಕ್ರಮಗಳು:

— ಪ್ರವೇಶ ಮತ್ತು ನಿರ್ಗಮನ ಸ್ಥಳಗಳಲ್ಲಿ ಥರ್ಮಲ್ ಸ್ಕ್ಯಾನರ್ ಮತ್ತು ಸಾನಿಟೈಸರ್‌ಗಳ ಸೂಕ್ತ ವ್ಯವಸ್ಥೆಗಳನ್ನು ಮಾಡಬೇಕು.

— ಪ್ರವೇಶ/ ನಿರ್ಗಮನ ಸ್ಥಳಗಳಲ್ಲಿ ಜನಸಂದಣಿಯನ್ನು ತಪ್ಪಿಸಬೇಕು. ವಿವಿಧ ಕೋರ್ಸುಗಳಿಗೆ ಸೀಮಿತ ವಿದ್ಯಾರ್ಥಿ ಸಂಖ್ಯೆಯನ್ನು ನಿಗಧಿಗೊಳಿಸಿ, ಪ್ರತ್ಯೇಕ ಪ್ರವೇಶ ಮತ್ತು ನಿರ್ಗಮನದ ಸಮಯಗಳನ್ನು ಅನುಸರಿಸಬೇಕು.

— ಆವರಣದ ಒಳಗೆ ಮತ್ತು ಹೊರಗೆ ಕ್ಯೂ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು, ನೆಲದ ಮೇಲೆ 6 ಅಡಿಗಳ ಅಂತರವಿರುವ ನಿರ್ದಿಷ್ಟ ಗುರುತುಗಳನ್ನು ಮಾಡುವುದು ಮತ್ತು ಅದನ್ನು ಪಾಲಿಸಬೇಕು.

— ಒಂದು ವೇಳೆ ಪ್ರವೇಶ/ ನಿರ್ಗಮನಕ್ಕೆ ಒಂದಕ್ಕಿಂತ ಹೆಚ್ಚು ಗೇಟ್ ಗಳನ್ನು ಸಂಸ್ಥೆಯು ಹೊಂದಿದ್ದಲ್ಲಿ, ಜನಸಂದಣಿಯನ್ನು ತಪ್ಪಿಸಲು, ಎಲ್ಲಾ ಗೇಟ್ ಗಳನ್ನು ಸಾಕಷ್ಟು ಎಚ್ಚರಿಕೆಯಿಂದ ಬಳಸಬೇಕು.

— ವಿದ್ಯಾರ್ಥಿಗಳ ಪ್ರವೇಶ ಮತ್ತು ನಿರ್ಗಮನದ ಮೇಲ್ವಿಚಾರಣೆಯನ್ನು ಮಾಡಬೇಕು.

— ವಿದ್ಯಾರ್ಥಿ, ಬೋಧಕ, ಬೋಧಕೇತರ ಸಿಬ್ಬಂದಿಯ ಥರ್ಮಲ್ ತಪಾಸಣೆ, ಮುಖಗವಸು/ ಮಾಸ್ಕ್ ಧರಿಸುವುದು, ಕೈಗಳನ್ನು ಶುದ್ಧಿಗೊಳಿಸುವುದನ್ನು ಎಲ್ಲಾ ಪ್ರವೇಶ ಕೇಂದ್ರಗಳಲ್ಲಿ ಖಚಿತಪಡಿಸಿಕೊಳ್ಳಬೇಕು.

— ಜ್ವರ, ಕೆಮ್ಮು, ಉಸಿರಾಟದ ತೊಂದರೆಯ ಲಕ್ಷಣಗಳನ್ನು ಹೊಂದಿರುವವರು ಶಿಕ್ಷಣ ಸಂಸ್ಥೆಯ ಆವರಣದೊಳಗೆ ಪ್ರವೇಶಿಸುವುದನ್ನು ನಿಷೇಧಿಸುವುದು.

ತರಗತಿಕೊಠಡಿಗಳು ಮತ್ತು ಇತರ ಕಲಿಕಾ ತಾಣಗಳು:

- ಎಲ್ಲಾ ಕಲಿಕಾ ಸ್ಥಳಗಳಲ್ಲಿ ನೈರ್ಮಲ್ಯವನ್ನು ಖಚಿತಪಡಿಸಿಕೊಳ್ಳಬೇಕು. ಆಗಾಗ್ಗೆ ಸ್ಪರ್ಶಿಸಲ್ಪಡುವ ಡೋರ್ ನಾಬ್ ಗಳು, ಎಲಿವೇಟರ್ ಬಟನ್ ಗಳು, ಹ್ಯಾಂಡ್ ರೈಲ್ ಗಳು, ಕುರ್ಚಿಗಳು, ಬೆಂಚುಗಳು, ವಾಶ್ ರೂಮ್ ಫಿಕ್ಚರ್ ಗಳು ಇತ್ಯಾದಿ, ಎಲ್ಲಾ ತರಗತಿಗಳು, ಪ್ರಯೋಗಾಲಯಗಳು, ಲಾಕರ್ ಗಳು, ಪಾರ್ಕಿಂಗ್ ಪ್ರದೇಶಗಳು ಹಾಗೂ ತರಗತಿಗಳಲ್ಲಿ ಸ್ವಚ್ಛಗೊಳಿಸುವಿಕೆ ಮತ್ತು ನಿಯತ ಸೋಂಕು ತಡೆಗಟ್ಟುವಿಕೆ (1% ಸೋಡಿಯಂ ಹೈಪೋಕ್ಲೋರೈಟ್ ಬಳಸಿ) ಪ್ರಕ್ರಿಯೆಯನ್ನು ತರಗತಿಗಳು ಪ್ರಾರಂಭವಾಗುವ ಮುನ್ನ ಮತ್ತು ದಿನದ ಕೊನೆಯಲ್ಲಿ ಕಡ್ಡಾಯಗೊಳಿಸಬೇಕು. ಬೋಧನಾ ಸಾಮಗ್ರಿಗಳು, ಕಂಪ್ಯೂಟರ್, ಲ್ಯಾಪ್ ಟಾಪ್, ಪ್ರಿಂಟರ್ ಗಳನ್ನು ನಿಯಮಿತವಾಗಿ 70% ಆಲ್ಕೋಹಾಲ್ ಸ್ವೈಪ್ ನಿಂದ ಒರೆಸಿ ಸೋಂಕು ತೆಗೆಯಬೇಕು.

- ತರಗತಿಗಳು, ಪ್ರಯೋಗಾಲಯಗಳು, ಕಂಪ್ಯೂಟರ್ ಲ್ಯಾಬ್ ಗಳು, ಗ್ರಂಥಾಲಯಗಳು ಮತ್ತು ಅಲ್ಲಿನ ಆಸನಗಳನ್ನು ಸ್ವಚ್ಛವಾಗಿಡಬೇಕು ಹಾಗೂ ಆಸನಗಳ ನಡುವೆ ಅಂತರವನ್ನು ಗುರುತಿಸಬೇಕು.

➢ ಉಗುಳುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸುವುದು.

➢ ಆರೋಗ್ಯ ಸೇತು ಆ್ಯಪ್ ಅನ್ನು ಮೊಬೈಲ್ ನಲ್ಲಿ ಅನುಸ್ಥಾಪನೆಗೊಳಿಸಿ ಬಳಸುವ ಕುರಿತು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗೆ ಸಲಹೆ ನೀಡುವುದು.

➢ ಅವಶ್ಯಕತೆಗೆ ಅನುಸಾರವಾಗಿ ಜಿಲ್ಲಾ ಆರೋಗ್ಯ ಕೇಂದ್ರದ ಸಹಾಯದೊಂದಿಗೆ ವೈದ್ಯಕೀಯ ಸಮಾಲೋಚಕರನ್ನು ವಿದ್ಯಾರ್ಥಿಗಳು ಭೇಟಿಮಾಡಿ ತಮ್ಮ ಆತಂಕ, ಮಾನಸಿಕ ಒತ್ತಡ ಅಥವಾ ಭಯದ ಬಗ್ಗೆ ಚರ್ಚಿಸಲು ಅವಕಾಶ ಕಲ್ಪಿಸುವುದು.

➢ ಸಾಮಾಜಿಕ ಅಂತರ ಕಾಪಾಡಲು ಶಿಕ್ಷಣ ಸಂಸ್ಥೆಗಳ ಆಯಕಟ್ಟಿನ ಸ್ಥಳಗಳಲ್ಲಿ ಸೂಚನಾ ಫಲಕ, ಚಿಹ್ನೆ, ಭಿತ್ತಿಪತ್ರಗಳನ್ನು ಪ್ರದರ್ಶಿಸಬೇಕು. ಸಂಸ್ಥೆಯ ಕೋವಿಡ್ ಕೋಶ/ ಕಾರ್ಯಪಡೆಯ ವಿವರಗಳನ್ನು ಪ್ರಚುರಗೊಳಿಸಬೇಕು (ತುರ್ತು ಸಂಖ್ಯೆ, ಸಹಾಯವಾಣಿ ಸಂಖ್ಯೆ, ಇಮೇಲ್ ಐಡಿ ಮತ್ತು ಸಂಪರ್ಕ).

➢ ಶಿಕ್ಷಕರು, ಅಧಿಕಾರಿಗಳು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವುದನ್ನು ಕಡ್ಡಾಯಗೊಳಿಸುವುದು.

➢ ಶಿಕ್ಷಣ ಸಂಸ್ಥೆಗಳು ಅಗತ್ಯಾನುಸಾರ ಬೋಧನಾ ಸಮಯವನ್ನು ವಿಸ್ತರಿಸಬಹುದು ಅಥವಾ ಪರಿವರ್ತಿಸುವುದು.

➢ ತರಗತಿ ಕೊಠಡಿ, ಕಲಿಕಾ ತಾಣಗಳಲ್ಲಿ ಸ್ಥಳಾವಕಾಶದ ಲಭ್ಯತೆಯನ್ನು ಆಧರಿಸಿ, ತರಗತಿಗಳಿಗೆ ಹಾಜರಾಗಲು 50% ವರೆಗಿನ ವಿದ್ಯಾರ್ಥಿಗಳಿಗೆ ರೊಟೇಷನ್ ಆಧಾರದ ಮೇಲೆ ಅವಕಾಶ ನೀಡುವುದು.

- ಸಂದರ್ಶಕರಿಗೆ ಪ್ರವೇಶ ನೀಡಬಾರದು ಅಥವಾ ಅವರ ಪ್ರವೇಶವನ್ನು ಕಟ್ಟುನಿಟ್ಟಾಗಿ ನಿರ್ಬಂಧಿಸಬೇಕು. ಪ್ರವೇಶಾವಕಾಶ ನೀಡಿದಲ್ಲಿ ಸಂದರ್ಶಕರ ಸಂಪೂರ್ಣ ಸಂಪರ್ಕ ವಿವರಗಳನ್ನು ಅವನು/ ಅವಳು ಭೇಟಿ ಯಾಗುವ ವ್ಯಕ್ತಿಗಳ ಹೆಸರುಗಳ ಜೊತೆಗೆ ನಿರ್ವಹಿಸತಕ್ಕದ್ದು.
- ವಿದ್ಯಾರ್ಥಿಗೆ ಅಥವಾ ಅವರ ಮನೆಯಲ್ಲಿ ಯಾವುದೇ ವ್ಯಕ್ತಿಗೆ ಕೋವಿಡ್ ಸೋಂಕಿನ ಲಕ್ಷಣಗಳಾದ ನೆಗಡಿ, ಕೆಮ್ಮು, ಜ್ವರ, ಮೂಗು ಸೋರುವುದು ಮುಂತಾದ ಲಕ್ಷಣಗಳಿದ್ದಲ್ಲಿ ವಿದ್ಯಾರ್ಥಿಯನ್ನು ಕಾಲೇಜಿಗೆ ಕಳುಹಿಸದೆ ಹಾಗೂ ಕೂಡಲೇ ಹತ್ತಿರದ ಆಸ್ಪತ್ರೆಯಲ್ಲಿ ಅಗತ್ಯ ಚಿಕಿತ್ಸೆ ಪಡೆಯುವ ಬಗ್ಗೆ ವಿದ್ಯಾರ್ಥಿ ಹಾಗೂ ಪೋಷಕರಿಗೆ ಅರಿವು ಮೂಡಿಸುವುದು.
- ವಿದ್ಯಾರ್ಥಿಗಳು ಕಾಲೇಜಿನ ಆವರಣವನ್ನು ಪ್ರವೇಶಿಸುತ್ತಿದ್ದಂತೆ ಸ್ಯಾನಿಟೈಸರ್ ಅಥವಾ ಸಾಬೂನಿನಿಂದ ಕೈಗಳನ್ನು ಸ್ವಚ್ಛಗೊಳಿಸಿಕೊಳ್ಳಲು ಅವಕಾಶ ಕಲ್ಪಿಸತಕ್ಕದ್ದು. ಅಗತ್ಯತೆಗೆ ಅನುಸಾರ ಥರ್ಮಲ್ ಸ್ಕ್ಯಾನರ್ ಗಳನ್ನು ಒದಗಿಸಿಕೊಳ್ಳುವುದು ಮತ್ತು ಪ್ರತಿ ದಿನ ಪ್ರತಿ ವಿದ್ಯಾರ್ಥಿಯ ದೇಹದ ಉಷ್ಣತೆಯನ್ನು ಕಡ್ಡಾಯವಾಗಿ ಪರೀಕ್ಷಿಸುವುದು.
- ವಿದ್ಯಾರ್ಥಿಗಳು ಕಾಲೇಜಿಗೆ ಪ್ರವೇಶಿಸುವ ಸಂದರ್ಭದಲ್ಲಿ ಯಾವುದೇ ವಿದ್ಯಾರ್ಥಿಗೆ ರೋಗ ಲಕ್ಷಣಗಳು ಇದ್ದಲ್ಲಿ ಅಂತಹ ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ಮನೆಗೆ ಕಳುಹಿಸಲು ಕ್ರಮವಹಿಸುವುದು ಹಾಗೂ ಅವರಿಗೆ ಅಗತ್ಯ ಚಿಕಿತ್ಸೆ ಪಡೆದುಕೊಳ್ಳಲು ಸೂಚಿಸುವುದು ಮತ್ತು ಮಾರ್ಗದರ್ಶನ ನೀಡುವುದು.
- ಕಾಲೇಜಿಗೆ ಬರುವ ಪ್ರತಿ ವಿದ್ಯಾರ್ಥಿಯು ಕಡ್ಡಾಯವಾಗಿ ಮತ್ತು ಸರಿಯಾಗಿ ಮಾಸ್ಕ್ (ಮುಖ ಕವಚ) ಧರಿಸಿರುವುದನ್ನು ಖಚಿತಪಡಿಸಿಕೊಳ್ಳುವುದು.
- ವಿದ್ಯಾರ್ಥಿಗಳು ಕಾಲೇಜಿನ ಆವರಣ, ತರಗತಿ ಕೊಠಡಿ, ಪ್ರಯೋಗಾಲಯ, ಗ್ರಂಥಾಲಯ, ಹಾಸ್ಟೆಲ್, ಉಪಹಾರ ಗೃಹ, ಕ್ರೀಡಾಂಗಣ, ಬ್ಯಾಂಕ್ ಸೇರಿದಂತೆ ಯಾವುದೇ ಸ್ಥಳ ಹಾಗೂ ಸಂದರ್ಭಗಳಲ್ಲಿಯೂ ಗುಂಪು ಸೇರದೆ ಕಡ್ಡಾಯವಾಗಿ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವ ಬಗ್ಗೆ ಸೂಚಿಸುವುದು.
- ವಿದ್ಯಾರ್ಥಿಗಳು / ಕಾಲೇಜು ಸಿಬ್ಬಂದಿ ಬಳಸಿದ ಮಾಸ್ಕ್ ಗಳನ್ನು ಸುರಕ್ಷಿತವಾಗಿ ವಿಲೇವಾರಿ ಮಾಡಲು ಸೂಕ್ತ ಕಸದ ತೊಟ್ಟಿ / ಬುಟ್ಟಿಗಳ ವ್ಯವಸ್ಥೆ ಮಾಡುವುದು.
- ಕಾಲೇಜಿನ ಪ್ರಾಂಶುಪಾಲರು, ಬೋಧಕರು ಮತ್ತು ಆಡಳಿತ ಸಿಬ್ಬಂದಿ ಎಲ್ಲರೂ ಕಡ್ಡಾಯವಾಗಿ ಮಾಸ್ಕ್ ಧರಿಸಿರಬೇಕು ಹಾಗೂ ಆಗಿಂದಾಗ್ಗೆ ಸಾಬೂನು/ ಸ್ಯಾನಿಟೈಸರ್ ನಿಂದ ಕೈತೊಳೆದುಕೊಳ್ಳುವುದು ಹಾಗೂ ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಬೇಕು.

- ಕಾಲೇಜಿನ ಪ್ರಾಂಶುಪಾಲರು, ಬೋಧಕರು, ಆಡಳಿತ ಸಿಬ್ಬಂದಿಗಳಲ್ಲಿ ಯಾರಿಗಾದರೂ ಕೋವಿಡ್ ಸೊಂಕಿನ ಲಕ್ಷಣಗಳು ಇದ್ದಲ್ಲಿ ಕಡ್ಡಾಯವಾಗಿ ಕೋವಿಡ್ ಪರೀಕ್ಷೆಯನ್ನು ಮಾಡಿಸುವುದು.

- ವಿದ್ಯಾರ್ಥಿಗಳ ಮಾನಸಿಕ ಮತ್ತು ದೈಹಿಕ ಸ್ವಾಸ್ಥ್ಯ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಆರೋಗ್ಯಕರ, ಶುಚಿ ಮತ್ತು ಸ್ವಾಸ್ಯವಾದ ಆಹಾರ ಪದಾರ್ಥಗಳನ್ನು ಬಳಸುವಂತೆ ವಿದ್ಯಾರ್ಥಿಗಳಿಗೆ ಸೂಚಿಸುವುದು ಹಾಗೂ ವಿದ್ಯಾರ್ಥಿಗಳ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ವ್ಯಾಯಾಮ, ಯೋಗ, ಸರಳ ಪ್ರಾಣಾಯಾಮಗಳನ್ನು ಸಾಮಾಜಿಕ ಅಂತರದೊಂದಿಗೆ ಮಾಡುವಂತೆ ಪ್ರೇರೇಪಿಸುವುದು.

- ಹೆಚ್ಚಿನ ಸಲಹೆ, ಮಾರ್ಗದರ್ಶನ ಮತ್ತು ಸಂಶಯಗಳ ನಿವಾರಣೆಗಾಗಿ ಹತ್ತಿರದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸುವುದು.

- ವಿದ್ಯಾರ್ಥಿಗಳ ಪೋಷಕರಿಂದ ನಿರಂತರ ಪ್ರತಿಕ್ರಿಯೆ (Continuous Feedback) ಪಡೆಯಲು ಕಾಲೇಜು ಹಂತದಲ್ಲಿ ಕಾರ್ಯವಿಧಾನಗಳನ್ನು ರೂಪಿಸಿಕೊಳ್ಳುವುದು.

- ಕಾಲೇಜು ಹಂತದಲ್ಲಿ ಕೋವಿಡ್ ಮಾರ್ಗಸೂಚಿಗಳ ಅನುಸರಣೆ ಹಾಗೂ ಕೋವಿಡ್-19 ರ ಸಾಂಕ್ರಾಮಿಕ ಹಿನ್ನಲೆಯಲ್ಲಿ ಉದ್ಭವಿಸುವಂತಹ ತುರ್ತು ಪರಿಸ್ಥಿತಿಗಳನ್ನು ನಿರ್ವಹಿಸಲು ಬೋಧಕವರ್ಗ ಹಾಗೂ ಬೋಧಕೇತರ ಸಿಬ್ಬಂದಿಯನ್ನೊಳಗೊಂಡ ಕೋವಿಡ್ ಕಾರ್ಯಪಡೆ (Taskforce) ಯನ್ನು ಪ್ರಾಂಶುಪಾಲರು ತಮ್ಮ ಅಧ್ಯಕ್ಷತೆಯಲ್ಲಿ ರಚಿಸುವುದು.

- ವಿಶ್ವವಿದ್ಯಾಲಯ ಹಂತದಲ್ಲಿ ಕೋವಿಡ್ ಮಾರ್ಗಸೂಚಿಗಳ ಅನುಸರಣೆ ಹಾಗೂ ಕೋವಿಡ್-19ರ ಸಾಂಕ್ರಾಮಿಕ ಹಿನ್ನಲೆಯಲ್ಲಿ ಉದ್ಭವಿಸುವಂತಹ ತುರ್ತು ಪರಿಸ್ಥಿತಿಗಳನ್ನು ನಿರ್ವಹಿಸಲು ಕೋವಿಡ್ ಕಾರ್ಯಪಡೆ (Taskforce) ಯನ್ನು ರಚಿಸಲು ಉಪಕುಲಪತಿಗಳು ಕ್ರಮಕೈಗೊಳ್ಳುವುದು.

- ಪ್ರತಿ ವಿಶ್ವವಿದ್ಯಾಲಯವು ತನ್ನ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳಿಂದ ನಿಯತವಾಗಿ ಶೈಕ್ಷಣಿಕ ಚಟುವಟಿಕೆಗಳಿಗೆ ಮತ್ತು ಆರೋಗ್ಯಕ್ಕೆ ಸಂಬಂಧಿಸಿದಂತೆ ದತ್ತಾಂಶಗಳನ್ನು ಪಡೆಯಲು ಕ್ರಮಕೈಗೊಳ್ಳುವುದು. ಕೋವಿಡ್ ಮಾರ್ಗಸೂಚಿಗಳನ್ನು ಪಾಲಿಸುವುದರ ಬಗ್ಗೆ ಸಂಬಂಧಿಸಿದ ಕಾಲೇಜು ಪ್ರಾಂಶುಪಾಲರೊಂದಿಗೆ ವಿಡಿಯೋ ಕಾನ್ಫರೆನ್ಸ್ ನಡೆಸಿ ವಿದ್ಯಾರ್ಥಿಗಳ ಆರೋಗ್ಯ ಸುರಕ್ಷತೆಗೆ ಕಾಲೇಜುಗಳು ತೆಗೆದುಕೊಂಡ ಕ್ರಮಗಳ ಬಗ್ಗೆ ವಿಶ್ವವಿದ್ಯಾಲಯವು ನಿಗಾವಹಿಸುವುದು.

- ಕಾಲೇಜಿನಲ್ಲಿ ಒಂದು ಪ್ರತ್ಯೇಕ ಕೊಠಡಿಯನ್ನು ಮೀಸಲಿಟ್ಟು ಅದರಲ್ಲಿ ಕೋವಿಡ್ ಪ್ರಥಮ ಚಿಕಿತ್ಸೆಗಾಗಿ ಕೋವಿಡ್ ಕಿಟ್‌ಗಳನ್ನು ಹಾಗೂ ಅಗತ್ಯತೆಗೆ ಅನುಸಾರವಾಗಿ ಪಲ್ಸ್-ಆಕ್ಸಿಮೀಟರ್‌ಗಳನ್ನು ಒದಗಿಸಿಕೊಳ್ಳುವುದು.

- ಕ್ಯಾಂಪಸ್ ನಲ್ಲಿ ಸಾಕಷ್ಟು ಸುರಕ್ಷಿತ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು.
- ಮಾನಸಿಕ ಆರೋಗ್ಯ & ಯೋಗಕ್ಷೇಮಕ್ಕೆ ಶಿಕ್ಷಣ ಸಚಿವಾಲಯದ ವೆಬ್ ಸೈಟ್ ನಲ್ಲಿ ರಚಿಸಲಾಗಿರುವ "ಮನೋದರ್ಪಣ್" ಹೆಸರಿನ ವೆಬ್ ಪೇಜ್ ನ ಬಗ್ಗೆ ಎಲ್ಲಾ ಬೋಧಕ ಸದಸ್ಯರು, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳಿಗೆ ಅರಿವು ಮೂಡಿಸಬೇಕು. ಈ ವೆಬ್ ಪೇಜ್ ಸಲಹೆ, ಪ್ರಾಯೋಗಿಕ ಸಲಹೆಗಳು, ಭಿತ್ತಿಪತ್ರಗಳು, ವೀಡಿಯೋಗಳು, ಮನೋಸಾಮಾಜಿಕ ಬೆಂಬಲ, FAQ ಮತ್ತು ಆನ್ ಲೈನ್ ಪ್ರಶ್ನೆ ಮಾಡುವ ಅವಕಾಶಗಳನ್ನು ಒಳಗೊಂಡಿದ್ದು, ಇವುಗಳ ಸದುಪಯೋಗ ಪಡಿಸಿಕೊಳ್ಳಲು ಕ್ರಮವಹಿಸಬೇಕು. ವಿದ್ಯಾರ್ಥಿಗಳಿಗೆ ಟೆಲಿ ಕೌನ್ಸಲಿಂಗ್ ನೀಡುವ ರಾಷ್ಟ್ರೀಯ ಟೋಲ್ ಫ್ರೀ ಸಹಾಯವಾಣಿ (8445440632) ಅನ್ನು ಸ್ಥಾಪಿಸಲಾಗಿದ್ದು, ಅದನ್ನು ಮಾನಸಿಕ ಆರೋಗ್ಯದ ಸಮಸ್ಯೆಗಳನ್ನು ಪರಿಹರಿಸಲು ಬಳಸಿಕೊಳ್ಳುವುದು.
- ಕೇಂದ್ರ ಆರೋಗ್ಯ & ಕುಟುಂಬ ಕಲ್ಯಾಣ ಸಚಿವಾಲಯ https://www.mohfw.gov.in ನವರ ಕೆಳಕಂಡ ವಿಡಿಯೋ ಮತ್ತು ಡಾಕ್ಯುಮೆಂಟ್ ಲಿಂಕ್ ಗಳನ್ನು ವಿಶ್ವವಿದ್ಯಾಲಯ/ ಕಾಲೇಜು ವೆಬ್ ಸೈಟ್ ನಲ್ಲಿ ಪ್ರಕಟಿಸುವುದು ಮತ್ತು ಸದರಿ ಲಿಂಕ್ ಗಳನ್ನು ವಿದ್ಯಾರ್ಥಿಗಳು ಮತ್ತು ಬೋಧಕರೊಂದಿಗೆ ಇ-ಮೇಲ್, ಸಾಮಾಜಿಕ ಜಾಲತಾಣಗಳಾದ ಫೇಸ್ ಬುಕ್, ವಾಟ್ಸಾಪ್ ಮತ್ತು ಟ್ವಿಟರ್ ಮೂಲಕ ಹಂಚಿಕೊಳ್ಳುವುದು.

  - ನಿಮ್ಮ ಮಾನಸಿಕ ಆರೋಗ್ಯವನ್ನು ನೋಡಿಕೊಳ್ಳಲು ಪ್ರಾಯೋಗಿಕ ಸಲಹೆಗಳು https://www.youtube.com/watch?v=uHB3WJsLJ8s&feature=youtube

  - COVID-19 ರ ಸಮಯದಲ್ಲಿ ಮನವನ್ನು ನಿಭಾಯಿಸುವ ಬಗ್ಗೆ. https://www.mohfw.gov.in/pdf/MindingourmindsduringCoronaeditedat.pdf

  - COVID-19 ಸಮಯದಲ್ಲಿ ಮಾನಸಿಕ ಆರೋಗ್ಯ ಮತ್ತು ಯೋಗಕ್ಷೇಮವನ್ನು ಹೇಗೆ ನಿರ್ವಹಿಸುವುದು ಎಂಬುದರ ಕುರಿತು ವಿವಿಧ ಆರೋಗ್ಯ ತಜ್ಞರ ಅಭಿಪ್ರಾಯಗಳನ್ನು ಪಾಲಿಸುವುದು: https://www.youtube.com/watch?v=iuKhtSehp24&feature=youtube

  - ನಡೆವಳಿಕೆಯ ಸ್ವಾಸ್ಥ್ಯ: ಸೈಕೋ-ಸೋಶಿಯಲ್ ಟೋಲ್ ಫ್ರೀ ಸಹಾಯವಾಣಿ – 0804611007

➢ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಿಬ್ಬಂದಿಗಳಲ್ಲಿ ಜಾಗೃತಿ ಮೂಡಿಸುವುದು.

— COVID-19 ಸೋಂಕು ಹೇಗೆ ಹರಡುತ್ತದೆ, ಸೋಂಕಿನ ಸಾಮಾನ್ಯ ಲಕ್ಷಣಗಳು ಮತ್ತು ಅದರ ಹರಡುವಿಕೆಯನ್ನು ನಿಯಂತ್ರಿಸಲು ಅಗತ್ಯವಿರುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸುವುದು.

— ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು, ಉದಾಹರಣೆಗೆ, ಕೈಗಳನ್ನು ಹೇಗೆ ತೊಳೆಯುವುದು, ಕೆಮ್ಮುವುದು ಅಥವಾ ಸೀನುವುದು ಹೇಗೆ ಹಾಗೂ ಮುಖ, ಕಣ್ಣು, ಬಾಯಿ ಮತ್ತು ಮೂಗುಗಳನ್ನು ಮುಟ್ಟುವುದನ್ನು ತಪ್ಪಿಸುವುದರ ಬಗ್ಗೆ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗೆ ನಿಯಮಿತವಾಗಿ ತಿಳಿಸುವುದು.

— ಸಾಮಾಜಿಕ ಅಂತರ, ಮುಖಕವಚ/ ಮಾಸ್ಕ್ ಧರಿಸುವುದು, ಸ್ವಚ್ಛತೆ ಇತ್ಯಾದಿಗಳ ಅಗತ್ಯವನ್ನು ಮನವರಿಕೆ ಮಾಡುವುದು.

— ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ವ್ಯಾಯಾಮ, ಯೋಗ, ಪ್ರಾಣಾಯಾಮ, ಧ್ಯಾನ ಮತ್ತು ಮುಂತಾದ ಚಟುವಟಿಕೆಗಳನ್ನು ಪ್ರೋತ್ಸಾಹಿಸುವುದು.

— ಮಾನಸಿಕ ಆರೋಗ್ಯವನ್ನು ಸುಧಾರಿಸಲು ವಿದ್ಯಾರ್ಥಿಗಳು ತಮ್ಮ ಭಾವನೆಗಳನ್ನು ಸ್ನೇಹಿತರು, ಶಿಕ್ಷಕರು ಮತ್ತು ಪೋಷಕರೊಂದಿಗೆ ಹಂಚಿಕೊಳ್ಳಲು ಪ್ರೋತ್ಸಾಹಿಸಬೇಕು. ಏಕಾಗ್ರತೆ, ಸಕಾರಾತ್ಮಕ ಮನೋಭಾವ, ಉತ್ತಮ ಆಹಾರ ಸೇವನೆ, ವಿಶ್ರಾಂತಿ ಮತ್ತು ನಿದ್ರೆಗಳ ಆವಶ್ಯಕತೆಯ ಬಗ್ಗೆ ಮನವರಿಕೆ ಮಾಡಿಕೊಡುವುದು.

— ಶುಚಿರುಚಿಯಾದ ಆಹಾರ ಮತ್ತು ತಾಜಾ ಹಣ್ಣುಗಳ ಸೇವನೆ, ಆಗಾಗ್ಗೆ ಬಿಸಿ ನೀರು ಕುಡಿಯುವುದು, ಜಂಕ್ ಫುಡ್ ಅಥವಾ ಇತರೆ ವಸ್ತುಗಳನ್ನು ತ್ಯಜಿಸುವ ಮೂಲಕ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿಕೊಳ್ಳುವ ಬಗ್ಗೆ ಅರಿವು ಮೂಡಿಸುವುದು.

— ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್, ಆಡಿಯೋ, ವಿಡಿಯೋ ಮತ್ತಿತರ ಮಾಧ್ಯಮ ಬಿಡಿಭಾಗಗಳನ್ನು ಶುಚಿಗೊಳಿಸುವಂತೆ ತಿಳಿಸುವುದು.

— ವಿದ್ಯಾರ್ಥಿಗಳು ತಮ್ಮ ಲ್ಯಾಪ್‌ಟಾಪ್‌ಗಳು, ಆಡಿಯೋ, ವಿಡಿಯೋ ಮತ್ತು ಇತರ ಮಾಧ್ಯಮ ಪರಿಕರಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸುವಂತೆ ತಿಳಿಸುವುದು

— COVID-19 ನ ಸೋಂಕು, ಪರಿಣಾಮ ಮತ್ತು ನಿಯಂತ್ರಣ ಕ್ರಮಗಳ ಬಗ್ಗೆ ಮುಕ್ತವಾಗಿ ಚರ್ಚಿಸುವುದು.

— ಕೊರೊನಾ ವೈರಸ್‌ನಿಂದ ಉಂಟಾಗುವ ಸೋಂಕಿನ ಅಪಾಯದ ಬಗ್ಗೆ ಜಾಗೃತಿ ಮೂಡಿಸಲು ಕ್ಯಾಂಪಸ್ ನ ಸೂಕ್ತ ಸ್ಥಳಗಳಲ್ಲಿ ಪೋಸ್ಟರ್ ಮತ್ತು ಸ್ಟಿಕ್ಕರ್‌ಗಳನ್ನು ಅಂಟಿಸಬೇಕು.

— ವಿಕಲಚೇತನರಿಗೆ ಸೂಕ್ತ ಮತ್ತು ಸಮಯೋಚಿತ ಸೌಲಭ್ಯಗಳನ್ನು ಒದಗಿಸಬೇಕು.

— ಜಾತಿ, ಮತ, ಲಿಂಗ ತಾರತಮ್ಯ ಮಾಡಬಾರದು.

— ಪುಸ್ತಕಗಳು, ಇತರ ಕಲಿಕಾ ಸಾಮಗ್ರಿಗಳು ಮತ್ತು ತಿನ್ನಬಹುದಾದ ವಸ್ತುಗಳನ್ನು ಹಂಚಿಕೊಳ್ಳುವುದನ್ನು ನಿರುತ್ಸಾಹಗೊಳಿಸಬೇಕು

➢ ಶೈಕ್ಷಣಿಕ ಚಟುವಟಿಕೆಗಳಿಗೆ ಮತ್ತು ಆರೋಗ್ಯಕ್ಕೆ ಸಂಬಂಧಿಸಿದಂತೆ ಕೇಂದ್ರ/ರಾಜ್ಯ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ನಿರ್ದೇಶನಗಳನ್ನು ಉನ್ನತ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಪಾಲಿಸುವುದು.

➢ ಹಾಸ್ಟೆಲ್‌ಗಳಿಗೆ ಸಂಬಂಧಿಸಿದ ಆರೋಗ್ಯ ಮಾರ್ಗಸೂಚಿಗಳನ್ನು ಸಮಾಜ ಕಲ್ಯಾಣ/ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹೊರಡಿಸಲಿದ್ದು ಸದರಿ ಮಾರ್ಗಸೂಚಿಗಳನ್ನು ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿನ ಹಾಗೂ ಇತರೆ ಎಲ್ಲಾ ಹಾಸ್ಟೆಲ್ ಗಳಲ್ಲಿಯೂ ಕಡ್ಡಾಯವಾಗಿ ಅನುಸರಿಸುವುದು.

➢ ಜಿಲ್ಲೆಯಲ್ಲಿನ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಕೋವಿಡ್ ಸಾಂಕ್ರಾಮಿಕ ತುರ್ತು ಪರಿಸ್ಥಿತಿಗಳನ್ನು ನಿರ್ವಹಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕೋವಿಡ್ ಉಸ್ತುವಾರಿ ಮತ್ತು ಸಮನ್ವಯ ಸಮಿತಿಯನ್ನು ರಚಿಸಲು ಕೆಳಕಂಡಂತೆ ಪ್ರಸ್ತಾಪಿಸಲಾಗಿದೆ.

| | | |
|---|---|---|
| 01. | **ಜಿಲ್ಲಾಧಿಕಾರಿ** | **ಅಧ್ಯಕ್ಷರು** |
| 02. | **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್** | **ಸದಸ್ಯರು** |
| 03. | **ಜಿಲ್ಲಾ ವೈದ್ಯಾಧಿಕಾರಿ** | **ಸದಸ್ಯರು** |
| 04. | **ಜಿಲ್ಲಾ ಸರ್ಜನ್** | **ಸದಸ್ಯರು** |
| 05. | **ಜಿಲ್ಲಾ ಸಾರಿಗೆ ಅಧಿಕಾರಿ (ಆರ್‌ಟಿಒ)** | **ಸದಸ್ಯರು** |
| 06. | **ವಿಭಾಗೀಯ ನಿಯಂತ್ರಣಾಧಿಕಾರಿ, ರಾಜ್ಯ ರಸ್ತೆ ಸಾರಿಗೆ ಸಂಸ್ಥೆ** | **ಸದಸ್ಯರು** |
| 07. | **ಜಿಲ್ಲಾಧಿಕಾರಿ, ಸಮಾಜ ಕಲ್ಯಾಣ ಇಲಾಖೆ** | **ಸದಸ್ಯರು** |
| 08. | **ಜಿಲ್ಲಾಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ** | **ಸದಸ್ಯರು** |
| 09. | **ಜಿಲ್ಲಾಧಿಕಾರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ** | **ಸದಸ್ಯರು** |
| 10. | **ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ** | **ಸದಸ್ಯ ಕಾರ್ಯದರ್ಶಿ** |

➢ ಜಿಲ್ಲಾ ಮಟ್ಟದ ಸಮಿತಿಯ ಪಾತ್ರ ಮತ್ತು ಕರ್ತವ್ಯಗಳು:

- ಜಿಲ್ಲೆಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಶೈಕ್ಷಣಿಕ ಮತ್ತು ಸಾಮಾನ್ಯ ಮಾರ್ಗಸೂಚಿಗಳ ಅನುಷ್ಠಾನವನ್ನು ಪರಿವೀಕ್ಷಿಸುವುದು.

- ಶಿಕ್ಷಣ ಸಂಸ್ಥೆಗಳಲ್ಲಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗೆ ಅವಶ್ಯಕತೆಗನುಸಾರವಾಗಿ ಕೋವಿಡ್ ತಪಾಸಣೆ ನಡೆಸುವುದು.

- ವಿದ್ಯಾರ್ಥಿಗಳಿಗೆ ಸಾರಿಗೆ ಮತ್ತು ಬಸ್‌ಪಾಸ್ ವ್ಯವಸ್ಥೆ ಕಲ್ಪಿಸುವುದು.

- ಕಾಲೇಜುಗಳಿಗೆ ಕೋವಿಡ್ ಪ್ರಥಮ ಚಿಕಿತ್ಸೆ ಕಿಟ್‌ಗಳನ್ನು ಒದಗಿಸುವುದು.

- ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಮತ್ತು ಇತರೆ ಹಾಸ್ಟೆಲ್‌ಗಳನ್ನು ಪ್ರಾರಂಭಿಸುವುದು ಮತ್ತು ಸದರಿ ಹಾಸ್ಟೆಲ್‌ಗಳಲ್ಲಿ ಕೋವಿಡ್ ಹರಡದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುವುದು.

- ವಿದ್ಯಾರ್ಥಿಗಳಲ್ಲಿ ಕರೋನ ಹರಡುವಿಕೆಯನ್ನು ತಡೆಗಟ್ಟುವ ಕುರಿತಂತೆ ಜಾಗೃತಿ ಮೂಡಿಸುವುದು.

- ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆ ಮತ್ತು ಆರೋಗ್ಯಕ್ಕೆ ಸಂಬಂಧಪಟ್ಟ ಇತರೆ ವಿಷಯಗಳು.

*********